## 50. ಜೈವಿಕ ತಂತ್ರಜ್ಞಾನದ ಜಾಗತಿಕ ಮನ್ನಣೆಗೆ ಕ್ರಮ

ಆರ್ಥಿಕತೆ ಮತ್ತು ಉದ್ಯೋಗ ಸೃಷ್ಟಿಗೆ ಹೆಚ್ಚಿನ ಮಹತ್ವ ನೀಡುವ ಜೊತೆಗೆ ಕರ್ನಾಟಕವು ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಜಾಗತಿಕ ಮನ್ನಣೆ ಪಡೆಯಲು ಬೇಕಾದ ಅಗತ್ಯ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು.

ನಗರದ ಎಲೆಕ್ಟ್ರಾನಿಕ್ ಸಿಟಿಯಲ್ಲಿ ಬೆಂಗಳೂರು ಲೈಫ್ ಸೈನ್ಸ್ ಪಾರ್ಕ್‌ಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿ, ರಾಜ್ಯದ ಆರ್ಥಿಕತೆಯ ಶಕ್ತಿಯಾಗಿರುವ ಜೈವಿಕ ತಂತ್ರಜ್ಞಾನ ಕ್ಷೇತ್ರಕ್ಕೆ ಎಲ್ಲ ಸೌಕರ್ಯಗಳನ್ನು ಆದ್ಯತೆಯ ಮೇರೆಗೆ ಒದಗಿಸಲಾಗುವುದು ಹಾಗೂ ಕರ್ನಾಟಕವು ಜಾಗತಿಕ ಮಟ್ಟದಲ್ಲಿ 'ಬಿಟಿ ಹಬ್' ಆಗಿ ಹೊರಹೊಮ್ಮುವುದಕ್ಕೆ ಬೇಕಾದ ಸರ್ವ ಕ್ರಮಗಳನ್ನೂ ತೆಗೆದುಕೊಳ್ಳಲಿದ್ದೇವೆ ಎಂದರು.

ಆರ್ಥಿಕತೆ ಹಾಗೂ ಉದ್ಯೋಗ ಸೃಷ್ಟಿಯಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ಣಾಯಕ ಪಾತ್ರ ವಹಿಸುತ್ತಿವೆ. ಈ ಎರಡೂ ಕ್ಷೇತ್ರಗಳಿಗೆ ಸರ್ಕಾರ ಮಹತ್ವ ನೀಡಲಿದೆ. ಈಗಾಗಲೇ ಅನೇಕ ಸುಧಾರಣಾ ಕ್ರಮಗಳನ್ನು ಜಾರಿಗೆ ತಂದು ಕೈಗಾರಿಕೆಗೆ ಪೂರಕ ವಾತಾವರಣ ನಿರ್ಮಿಸಿದ್ದೇವೆ. ವಾಣಿಜ್ಯ ಕೈಗಾರಿಕೆ ಕ್ಷೇತ್ರಗಳಿಗೆ ಇನ್ನು ಹೆಚ್ಚಿನ ಮನ್ನಣೆ ನೀಡಲಾಗುವುದು ಎಂದು ಭರವಸೆ ನೀಡಿದರು.

**ದಶಕಗಳ ಕನಸು:** ಐಟಿ, ಬಿಟಿ ಸಚಿವರು ಆಗಿರುವ ಡಿಸಿಎಂ ಡಾ:ಸಿ.ಎನ್.ಅಶ್ವತ್ಥನಾರಾಯಣ ಮಾತನಾಡಿ, ಎರಡು ದಶಕಗಳಿಂದ ನನೆಗುದಿಗೆ ಬಿದ್ದಿದ್ದ ಯೋಜನೆ ಸಾಕಾರವಾಗುವ ಸಮಯ ಬಂದಿದ್ದು, ನಮ್ಮ ಸರ್ಕಾರದ ಇಚ್ಛಾಶಕ್ತಿಯಿಂದ ಇದು ಸಾಧ್ಯವಾಗುತ್ತಿದೆ. ಸಂಶೋಧನೆ, ಅಭಿವೃದ್ಧಿ ಎಲ್ಲವೂ ಒಂದೇ ಸೂರಿನ ಅಡಿಯಲ್ಲಿ ಆಗಲಿದೆ. ಈ ಯೋಜನೆ ಸಾಕಾರಗೊಂಡ ಮೇಲೆ ಜಾಗತಿಕ ಭೂಪಟದಲ್ಲಿ ಬೆಂಗಳೂರಿನ ಪ್ರತಿಷ್ಠೆ ಮತ್ತಷ್ಟು ಹೆಚ್ಚಲಿದೆ ಎಂದರು.

ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಕೃಷಿ, ಕೈಗಾರಿಕೆ, ಆರೋಗ್ಯ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಇದರ ಪ್ರಭಾವ ಇದೆ. ಸರ್ಕಾರ ಅನೇಕ ಸುಧಾರಣಾ ಕ್ರಮಗಳನ್ನು ಜಾರಿ ಮಾಡಿದೆ. ಕಾನೂನುಗಳನ್ನು ಸರಳಗೊಳಿಸಿ ಹೂಡಿಕೆಗೆ ಪೂರಕವಾದ ವಾತಾವರಣ ಸೃಷ್ಟಿ ಮಾಡಲಾಗಿದೆ. ಕರ್ನಾಟಕ ಆವಿಷ್ಕಾರ ಪ್ರಾಧಿಕಾರ ಸ್ಥಾಪಿಸಲಾಗಿದೆ. ಇನ್‌ವೆಸ್ಟ್ ಕರ್ನಾಟಕ ಮೂಲಕ ಹೂಡಿಕೆಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ. ದೇಶದ ಯಾವುದೇ ರಾಜ್ಯವೂ ಕೈಕೊಳ್ಳದಂತಹ ಪರಿಣಾಮಕಾರಿ ಕ್ರಮಗಳನ್ನು ಯಡಿಯೂರಪ್ಪ ನೇತೃತ್ವದ ಸರ್ಕಾರ ತೆಗೆದುಕೊಂಡಿದೆ ಎಂದರು. ಸಿ.ಎಂ. ರಾಜಕೀಯ ಕಾರ್ಯದರ್ಶಿ ಎಸ್.ಆರ್.ವಿಶ್ವನಾಥ್, ಶಾಸಕ ಎಂ.ಕೃಷ್ಣಪ್ಪ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಡಾ: ಇ.ವಿ.ರಮಣರೆಡ್ಡಿ, ಬೆಂಗಳೂರು ಲೈಫ್ ಸೈನ್ಸ್ ಪಾರ್ಕ್‌ನ ಸಿಇಒ ಚಿರಾಗ್ ಪುರುಷೋತ್ತಮ್, ಕೈಗಾರಿಕಾ ತಾಂತ್ರಿಕ ಸಂಸ್ಥೆಯ ನಿರ್ದೇಶಕಿ ಮೀನಾ ನಾಗರಾಜ್ ಇದ್ದರು.

ಆಧಾರ:ಉದಯವಾಣಿ, ದಿನಾಂಕ:30.07.2020